ದಿನಾಂಕ 30.07.2026 ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.

**<u>ಅನುಮತಿ ಮೇರೆಗೆ ಮುಂದುವರಿದ ಪಾಟಿ ಸವಾಲುಃ ಸರಕಾರಿ ಅಭಿಯೋಜಕರಿಂದ</u>**

ನಾನು ಘಟನೆಯ ಬಗ್ಗೆ ನ್ಯಾಯಾಧೀಶರ ಮುಂದೆ ಹೇಳಿಕೆ ಕೊಟ್ಟಿದ್ದೇನೆ. ಸದ್ರಿ ಹೇಳಿಕೆಯಲ್ಲಿ ನಾನು ಘಟನೆಯನ್ನು ನೋಡಿದ್ದೇನೆ ಎಂದು ಹೇಳಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿ ಹೇಳಿಕೆಯಲ್ಲಿರುವ ತನ್ನ ಸಹಿಯನ್ನು ಗುರುತಿಸಿದ್ದು, ಹೇಳಿಕೆಯನ್ನು ನಿಪಿ-34 ಎಂದು, ಸಾಕ್ಷಿಯ ಸಹಿಯನ್ನು ನಿಪಿ-34(ಎ) ಎಂದು ಗುರುತಿಸಲಾಯಿತು. ಘಟನೆಯ ಪ್ರತ್ಯಕ್ಷದರ್ಶಿ ಸಾಕ್ಷಿದಾರ ನಾಗಿದ್ದರೂ ಸಹಾ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮುಂದುವರಿದ ಪಾಟೀ ಸವಾಲುಃ ಆರೋಪಿ ಪರ ಶ್ರೀ ಆರ್.ಪಿ. ವಕೀಲರಿಂದಃ</u>**

ನ್ಯಾಯಾಲಯಕ್ಕೆ ನನ್ನನ್ನು ಪೋಲಿಸರು ಕರೆದುಕೊಂಡು ಹೋಗಿದ್ದರು, ಅವರ ಹೇಳಿದ ಪ್ರಕಾರ ಹೇಳಿಕೆ ಕೊಟ್ಟಿದ್ದೇನೆ ಎಂದರೆ ಸರಿ. ಘಟನೆ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ ಎಂದರೆ ಸರಿ.

**<u>ಮರು ವಿಚಾರಣೆಃ</u> ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದರು.

ಎರಡನೇಯ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉಡುಪಿ